ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು- 560001**

ಸಂಖ್ಯೆ:ಸಿ7[2] ಪ್ರಾಶಿಅ/ಹೊ.ಶಾ.ನೋಂ. 85/2017-18 ದಿನಾಂಕ: 29-05-2018

## ಸುತ್ತೋಲೆ

ವಿಷಯ: 2018-19ನೇ ಸಾಲಿನಲ್ಲಿ ಹೊಸದಾಗಿ ಶಾಶ್ವತ ಅನುದಾನರಹಿತ ಪೂರ್ವ ಪ್ರಾಥಮಿಕ/ಪ್ರಾಥಮಿಕ/ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ನೋಂದಣಿ ನೀಡುವ ಕುರಿತು.

ಉಲ್ಲೇಖ: 1] ಕರ್ನಾಟಕ ಶಿಕ್ಷಣ ಕಾಯಿದೆ-1983 ಸೆಕ್ಷನ್- 30 ಮತ್ತು 31.

2] ಕರ್ನಾಟಕ ಶಿಕ್ಷಣ ಸಂಸ್ಥೆಗಳು(ವರ್ಗೀಕರಣ ಮತ್ತು ನೋಂದಣಿ) ನಿಯಮಗಳು-1997.

3] ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ-2009.

4] Karnataka Educational Institutions (Classification, Regulation and Prescription of Curricula etc] [Amendment ] Rules 2018.

5] Karnataka Educational Institutions (Classification & Registration] [Amendment ] Rules 2018.

6] ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 26-03-2018.

7] ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 22-05-2018.

8] ಮುಖ್ಯ ಚುನಾವಣಾಧಿಕಾರಿಗಳು, ಕರ್ನಾಟಕ ರವರು ಕಡತ ಸಂಖ್ಯೆ: ಸಿ.ಆ.ಸು.ಇ 360 ಎಂ.ಸಿ.ಸಿ ಅಮು.ಚು.ಅ 01/2018ರ ಕಂಡಿಕೆ-09ರಲ್ಲಿ ನೀಡಿರುವ ಅನುಮತಿಯಂತೆ.

****************

2018-19ನೇ ಸಾಲಿನ ಖಾಸಗಿ ಅನುದಾನ ರಹಿತ ಪೂರ್ವ ಪ್ರಾಥಮಿಕ, ಪ್ರಾಥಮಿಕ, ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ನೋಂದಣಿ ನೀಡುವ ಕುರಿತು ನೋಂದಾಯಿತ ಅರ್ಹ ಸಂಸ್ಥೆಗಳಿಂದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಇಲಾಖಾ ವೆಬ್‌ಸೈಟ್‌ನಲ್ಲಿ ಸಲ್ಲಿಸಲು ಉಲ್ಲೇಖ-6ರ ಈ ಕಚೇರಿಯ ಸುತ್ತೋಲೆಯಲ್ಲಿ ಅವಕಾಶ ಕಲ್ಪಿಸಿದ್ದು, ಈಗಾಗಲೇ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಮುಕ್ತಾಯ ಗೊಂಡಿರುತ್ತದೆ.

2018-19ನೇ ಸಾಲಿನ ಖಾಸಗಿ ಅನುದಾನ ರಹಿತ ಪೂರ್ವ ಪ್ರಾಥಮಿಕ, ಪ್ರಾಥಮಿಕ, ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ನೋಂದಣಿ ನೀಡುವ ಸಂಬಂಧ ಸಲ್ಲಿಕೆಯಾದ ಪ್ರಸ್ತಾವನೆಗಳನ್ನು ಉಲ್ಲೇಖ-4 ಮತ್ತು 5ರ ಸರ್ಕಾರದ ಅಧಿಸೂಚನೆಯಂತೆ ಪರಿಶೀಲಿಸಿ ಅರ್ಹ ಪ್ರಸ್ತಾವನೆಗಳಿಗೆ ಅನುಮತಿ ನೀಡುವ ಬಗ್ಗೆ ಸೂಕ್ತ ಕ್ರಮವಹಿಸಲು ಸಿದ್ಧಪಡಿಸಿಕೊಂಡು ಕಾಯ್ದಿರಿಸಿಕೊಳ್ಳುವಂತೆ ಈಗಾಗಲೇ ಉಲ್ಲೇಖ-7ರ ಈ ಕಛೇರಿಯ ಸುತ್ತೋಲೆಯಲ್ಲಿ ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮತ್ತು ಉಪನಿರ್ದೇಶಕರಿಗೆ ಸೂಚನೆ ನೀಡಲಾಗಿದೆ.

ಪ್ರಸ್ತುತ ರಾಜ್ಯದ 03 ಪದವೀಧರ ಮತ್ತು 03 ಶಿಕ್ಷಕರ ಕ್ಷೇತ್ರಗಳಿಗೆ ಚುನಾವಣೆಗಳು ನಿಗಧಿಯಾಗಿರುವುದರಿಂದ ಸದರಿ ಚುನಾವಣೆಗಳ ಮಾದರಿ ನೀತಿ ಸಂಹಿತೆ ಜಾರಿಯಾಗಿರುತ್ತದೆ. ಈ ಹಿನ್ನೆಲೆಯಲ್ಲಿ 2018-19ನೇ ಸಾಲಿನಲ್ಲಿ ಖಾಸಗಿ ಅನುದಾನ ರಹಿತ ಪೂರ್ವ ಪ್ರಾಥಮಿಕ, ಪ್ರಾಥಮಿಕ, ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ನೋಂದಣಿ ನೀಡುವ ಬಗ್ಗೆ ಉಲ್ಲೇಖ-8ರಲ್ಲಿ ಮಾನ್ಯ ಮುಖ್ಯ

ಚುನಾವಣಾಧಿಕಾರಿಗಳು, ಕರ್ನಾಟಕ ರಾಜ್ಯ ರವರು ನೀಡಿರುವ ಅನುಮತಿಯಂತೆ ಯಾವ ಜಿಲ್ಲೆಗಳಲ್ಲಿ ಪದವೀಧರ ಮತ್ತು ಶಿಕ್ಷಕರ ಕ್ಷೇತ್ರಗಳ ಚುನಾವಣೆ ನೀತಿ ಸಂಹಿತೆ ಅನ್ವಯವಾಗುವುದಿಲ್ಲವೊ ಅಂತಹಾ ಜಿಲ್ಲೆಗಳಲ್ಲಿ ಹೊಸ ಶಾಲೆಗಳಿಗೆ ನೋಂದಣಿಯನ್ನು ನೀಡಲು ಸಂಬಂಧಿಸಿದ ನೋಂದಣಿ ಪ್ರಾಧಿಕಾರಗಳು ಕೂಡಲೇ ತುರ್ತು ಕ್ರಮವಹಿಸುವುದು ಮತ್ತು ಯಾವ ಜಿಲ್ಲೆಗಳಿಗೆ ಪದವೀಧರ ಮತ್ತು ಶಿಕ್ಷಕರ ಕ್ಷೇತ್ರಗಳ ಚುನಾವಣೆ ನೀತಿ ಸಂಹಿತೆ ಅನ್ವಯವಾಗುತ್ತದೆಯೊ ಅಂತಹಾ ಜಿಲ್ಲೆಗಳಿಗೆ ಹೊಸ ಶಾಲೆಗಳಿಗೆ ನೋಂದಣಿಯನ್ನು ನೀಡಲು ಸಂಬಂಧಿಸಿದ ನೋಂದಣಿ ಪ್ರಾಧಿಕಾರಗಳು ನೀತಿ ಸಂಹಿತೆ ಮುಕ್ತಾಯವಾದ ನಂತರ ಕ್ರಮವಹಿಸುವಂತೆ ತಿಳಿಸಿದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ.

**ಪ್ರತಿಯನ್ನು ಮಾಹಿತಿಗಾಗಿ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01.

**ಪ್ರತಿಯನ್ನು ಅಗತ್ಯಕ್ರಮಕ್ಕಾಗಿ:**

1] ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರಗಿ ವಿಭಾಗ ರವರಿಗೆ.
2] ನಿರ್ದೇಶಕರು ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ.
3] ನಿರ್ದೇಶಕರು ಪ್ರಾಥಮಿಕ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ.
4] ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ.
5] ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ.
7] ಕಛೇರಿ ಪ್ರತಿ.